ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ಹಾಗೂ ವಸತಿ ಶಾಲೆ /ವಸತಿ ಕಾಲೇಜುಗಳ ಮತ್ತು ಆಶ್ರಮ ಶಾಲೆಗಳ ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1. 2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂ.191

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತ ಪ್ರಸ್ತಾವನೆ ಸಂ.ಹಿಂವಕನಿ/ವನಿಶಾ-2/ಸಿಆರ್-2/2016-17, ದಿನಾಂಕ:11.04.2016

********

ಪ್ರಸ್ತಾವನೆ:

2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 191 ರಲ್ಲಿ ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನಂತೆ ಘೋಷಿಸಿರುತ್ತಾರೆ.

"ಹಿಂದುಳಿದ ವರ್ಗಗಳ ಆಶ್ರಮ ಶಾಲೆ, ಮೆಟ್ರಿಕ್-ಪೂರ್ವ, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು ಮತ್ತು ವಸತಿಶಾಲೆಗಳ ಮಾಸಿಕ ಭೋಜನದ ವೆಚ್ಚಗಳನ್ನು 200 ರೂ.ಗಳಷ್ಟು ಮತ್ತು ಖಾಸಗಿ ಅನುದಾನಿತ ವಿದ್ಯಾರ್ಥಿ ನಿಲಯಗಳು ಹಾಗೂ ಅನಾಥಾಲಯಗಳ ವಿದ್ಯಾರ್ಥಿಗಳ ಮಾಸಿಕ ಭೋಜನ ದರವನ್ನು ಹಾಲಿ ದರಕ್ಕಿಂತ 200 ರೂ.ಗಳಷ್ಟು ಹೆಚ್ಚಿಸಲಾಗುವುದು. ಇದರಿಂದ ಹೆಚ್ಚಿನ ಪೌಷ್ಠಿಕ ಹಾಗೂ ಗುಣಮಟ್ಟದ ಆಹಾರವನ್ನು ಒದಗಿಸಲು ಸಾಧ್ಯವಾಗುತ್ತದೆ."

ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ಹಾಗೂ ವಸತಿಶಾಲೆ /ವಸತಿ ಕಾಲೇಜುಗಳ ಮತ್ತು ಆಶ್ರಮಶಾಲೆಗಳ ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು ಹಾಗೂ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು 2016-17ನೇ ಸಾಲಿನ ಜೂನ್ ಮಾಹೆಯಿಂದ ಅನ್ವಯವಾಗುವಂತೆ ಈ ಕೆಳಗಿನಂತೆ ಹೆಚ್ಚಿಸಿ, ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| ಕ್ರ. ಸಂ. | ವಿವರ | ಪ್ರತಿ ವಿದ್ಯಾರ್ಥಿಗೆ ಹಾಲಿ ನೀಡುತ್ತಿರುವ ಮಾಸಿಕ ಭೋಜನಾ ವೆಚ್ಚ (ರೂ.ಗಳಲ್ಲಿ) | ಪ್ರತಿ ವಿದ್ಯಾರ್ಥಿಗೆ ಪರಿಷ್ಕರಿಸಿ, ರೂ.200/- ರಂತೆ ಹೆಚ್ಚಿಸಲಾಗಿರುವ ಮಾಸಿಕ ಭೋಜನಾ ವೆಚ್ಚ (ರೂ.ಗಳಲ್ಲಿ) |
|---|---|---|---|
| 1 | ಸರ್ಕಾರಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 1100/- | 1300/- |
| 2 | ಸರ್ಕಾರಿ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಹಾಗೂ ವಸತಿಶಾಲೆ/ ವಸತಿ ಕಾಲೇಜುಗಳ ವಿದ್ಯಾರ್ಥಿಗಳಿಗೆ | 1200/- | 1400/- |

| | | | |
|---|---|---|---|
| 3 | ಸರ್ಕಾರಿ ಆಶ್ರಮಶಾಲೆಗಳು | 900/- | 1100/- |
| 4 | ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 800/- | 1000/- |
| 5. | ಖಾಸಗಿ ಅನುದಾನಿತ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 900/- | 1100/- |
| 6 | ಖಾಸಗಿ ಅನುದಾನಿತ ಅನಾಥಾಲಯಗಳ ಮಕ್ಕಳಿಗೆ | 500/- | 700/- |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂ.ಹಿಂವಕ 352 ಬಿಎಂಎಸ್ 2016, ಬೆಂಗಳೂರು
ದಿನಾಂಕ:23.07.2016

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ /ವಸತಿ ಕಾಲೇಜುಗಳ ಮತ್ತು ಆಶ್ರಮ ಶಾಲೆಗಳ ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರವನ್ನು ಹಾಲಿ ದರಕ್ಕಿಂತ 200 ರೂ.ಗಳನ್ನು 2016-17ನೇ ಸಾಲಿನ ಜೂನ್ ಮಾಹೆಯಿಂದ ಅನ್ವಯವಾಗುವಂತೆ ಈ ಕೆಳಗಿನಂತೆ ಹೆಚ್ಚಿಸಿ, ಆದೇಶಿಸಲಾಗಿದೆ.

| ಕ್ರ. ಸಂ. | ವಿವರ | ಪ್ರತಿ ವಿದ್ಯಾರ್ಥಿಗೆ ಹಾಲಿ ನೀಡುತ್ತಿರುವ ಮಾಸಿಕ ಭೋಜನಾ ವೆಚ್ಚ (ರೂ.ಗಳಲ್ಲಿ) | ಪ್ರತಿ ವಿದ್ಯಾರ್ಥಿಗೆ ಪರಿಷ್ಕರಿಸಿ, ರೂ.200/- ರಂತೆ ಹೆಚ್ಚಿಸಲಾಗಿರುವ ಮಾಸಿಕ ಭೋಜನಾ ವೆಚ್ಚ (ರೂ.ಗಳಲ್ಲಿ) |
|---|---|---|---|
| 1 | ಸರ್ಕಾರಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 1100/- | 1300/- |
| 2 | ಸರ್ಕಾರಿ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಹಾಗೂ ವಸತಿಶಾಲೆ/ ವಸತಿ ಕಾಲೇಜುಗಳ ವಿದ್ಯಾರ್ಥಿಗಳಿಗೆ | 1200/- | 1400/- |
| 3 | ಸರ್ಕಾರಿ ಆಶ್ರಮ ಶಾಲೆಗಳು | 900/- | 1100/- |
| 4 | ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 800/- | 1000/- |
| 5 | ಖಾಸಗಿ ಅನುದಾನಿತ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 900/- | 1100/- |
| 6 | ಖಾಸಗಿ ಅನುದಾನಿತ ಅನಾಥಾಲಯಗಳ ಮಕ್ಕಳಿಗೆ | 500/- | 700/- |

.....3

ಸದರಿ ವೆಚ್ಚವನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ 2016-17ನೇ ಸಾಲಿನಲ್ಲಿ ಒದಗಿಸಿರುವ ಅನುದಾನ ಮಿತಿಯೊಳಗೆ ಭರಿಸತಕ್ಕದ್ದು.

| ಕ್ರ ಸಂ. | ಲೆಕ್ಕಶೀರ್ಷಿಕೆ | ವಲಯ | ಯೋಜನೆ/ ಯೋಜನೇತರ | ಒದಗಿಸಿರುವ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | 2225-00-103-0-26 (ಸರ್ಕಾರಿ/ ಖಾಸಗಿ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ) | ಜಿಲ್ಲಾವಲಯ | ಯೋಜನೆ ಮತ್ತು ಯೋಜನೇತರ | ಯೋಜನೆ ರೂ.19498.96<br>ಯೋಜನೇತರ ರೂ.27748.00 |
| 2 | 2225-03-277-2-53 (ಸರ್ಕಾರಿ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ) | ರಾಜ್ಯವಲಯ | ಯೋಜನೆ | ರೂ.16625.00 |
| 3 | 2225-00-103-0-41 (ಆಶ್ರಮಶಾಲೆಯ ವಿದ್ಯಾರ್ಥಿಗಳಿಗೆ) | ಜಿಲ್ಲಾವಲಯ | ಯೋಜನೇತರ | ರೂ.421.00 |
| 4 | 2225-03-277-2-62 (ಮೊರಾರ್ಜಿ ದೇಸಾಯಿ ವಸತಿಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ) ಮತ್ತು<br>2225-03-277-2-77 (ಶಿಕ್ಷಣ ಇಲಾಖೆಯಿಂದ ವರ್ಗಾವಣೆ ಗೊಂಡ ಮೊರಾರ್ಜಿ ದೇಸಾಯಿ ವಸತಿಶಾಲೆಗಳು) | ರಾಜ್ಯವಲಯ<br>ರಾಜ್ಯವಲಯ | ಯೋಜನೆ<br>ಯೋಜನೇತರ | ರೂ.16275.00<br>ರೂ.472.00 |
| 5 | 2225-00-103-0-73 ಅನಾಥಾಲಯಗಳಿಗೆ ಸಹಾಯಧನ | ಜಿಲ್ಲಾವಲಯ | ಯೋಜನೇತರ | ರೂ.467.00 |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ.ಆಇ 397 ವೆಚ್ಚ-3/2016 ದಿನಾಂಕ:06.06.2016ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 87 ಐಎಂಎಂ 2016 ದಿನಾಂಕ:11.07.2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ - ಮುಂದಿನ ವಿಶೇಷ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸುವಂತೆ ಕೋರಿದೆ.

.....4

2. ಮಹಾಲೇಖಪಾಲರು (ಎ ಮತ್ತು ಇ), ಲೆಕ್ಕ ಪರಿಶೋಧನೆ-1 ಮತ್ತು 2) ಕರ್ನಾಟಕ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
5. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ
6. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.
7. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3) ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.